**I/116804/2021**

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಏಕೀಕೃತ ಸಾರ್ವಜನಿಕ ದೂರು ನಿವಾರಣಾ ವ್ಯವಸ್ಥೆ (Integrated Public Grievance Redressal System)ಯ ಅನುಷ್ಠಾನದ ಬಗ್ಗೆ ಪ್ರಗತಿ ಪರಿಶೀಲನೆ ಮಾಡಲು ಸಮಿತಿಗಳನ್ನು ರಚಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 7 ಪಿಆರ್‌ಜೆ 2018, ದಿನಾಂಕ: 28-09-2018
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 29 ಪಿಆರ್‌ಜೆ 2020, ದಿನಾಂಕ:06-12-2020
3. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 29 ಪಿಆರ್‌ಜೆ 2020, ದಿನಾಂಕ:09-08-2021

**ಪ್ರಸ್ತಾವನೆ:**

2018-19ನೇ ಸಾಲಿನ ಜುಲೈ ಮಾಹೆಯ ಆಯವ್ಯಯ ಭಾಷಣದಲ್ಲಿ ರಾಜ್ಯದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸಾರ್ವಜನಿಕರು ತಮ್ಮ ಕುಂದುಕೊರತೆ / ದೂರುಗಳನ್ನು ದಾಖಲಿಸಲು ಒಂದು ಸಮಗ್ರವಾದ ಹಾಗೂ ಸದೃಢವಾದ ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆಯನ್ನು (iPGRS) ಕಲ್ಪಿಸಬೇಕು ಎಂದು ಘೋಷಿಸಲಾಗಿರುತ್ತದೆ. ಆದ್ದರಿಂದ, ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ: 28-09-2018ರ ಆದೇಶದಲ್ಲಿ ತಂತ್ರಾಂಶದ ವಿನ್ಯಾಸವನ್ನು ರೂಪಿಸುವ ಸಲುವಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಇವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯನ್ನೊಳಗೊಂಡಂತೆ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯ ಶಿಫಾರಸ್ಸಿನಂತೆ ಇ-ಆಡಳಿತ ಸಚಿವಾಲಯದ ವ್ಯಾಪ್ತಿಯಲ್ಲಿನ Centre For Smart Governanceನಿಂದ ಏಕೀಕೃತ ಕುಂದುಕೊರತೆ ನಿವಾರಣಾ ವ್ಯವಸ್ಥೆಯ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದೆ.

ಮಾನ್ಯ ಉಚ್ಚ ನ್ಯಾಯಾಲಯದ ಆದೇಶ ಸಂಖ್ಯೆ: 41189 / 2012ರ ದಿನಾಂಕ: 19-03-2019ರ ತೀರ್ಪಿನನ್ವಯ ಮೇಲೆ ಓದಲಾದ ಕ್ರಮಾಂಕ (2)ರ ದಿನಾಂಕ: 06-12-2020ರ ಆದೇಶದಲ್ಲಿ ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆಯನ್ನು ರಾಜ್ಯ ಸರ್ಕಾರವು ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರ ದಿನಾಂಕ:09-08-2021ರ ಆದೇಶದಲ್ಲಿ ತುರ್ತು ಸೇವೆಗಳಾದ ಪೋಲಿಸ್ / ಅಗ್ನಿಶಾಮಕ / ಆಂಬ್ಯುಲೆನ್ಸ್ / ವಿಕೋಪ ಪರಿಹಾರ ಸೇವೆಗಳ ಸಹಾಯವಾಣಿ ಸಂಖ್ಯೆ: 100, 101, 108, 1912 ಇತ್ಯಾದಿ ಹಾಗೂ ವಾಣಿಜ್ಯ ಸೇವಾ ಭಾಗವಾಗಿ ನಿರ್ವಹಿಸಲ್ಪಡುವ ಸಹಾಯವಾಣಿ / ದೂರು ನಿರ್ವಹಣಾ ವ್ಯವಸ್ಥೆಗಳನ್ನು (ಎಲ್ಲಾ ಎಸ್ಕಾಂಗಳು ಮತ್ತು ನೀರು-ನೈರ್ಮಲ್ಯ) ಹೊರತುಪಡಿಸಿ, ಉಳಿದ ಎಲ್ಲಾ ರೀತಿಯ ಸಾರ್ವಜನಿಕರಿಂದ ದಾಖಲಿಸಲಾಗುವ ಸಾಮಾನ್ಯ ಕುಂದುಕೊರತೆ / ದೂರುಗಳನ್ನು ಇನ್ನು ಮುಂದೆ ಜನಸ್ಪಂದನ **(ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ)**ದಲ್ಲಿಯೇ ಸ್ವೀಕರಿಸಲು ಮತ್ತು ಸದರಿ ನಿವಾರಣಾ ವ್ಯವಸ್ಥೆಯಲ್ಲಿ ಸ್ವೀಕರಿಸಲಾದ ಸಾರ್ವಜನಿಕ ಕುಂದುಕೊರತೆಗಳನ್ನು ಸಮಗ್ರವಾಗಿ ಹಾಗೂ ಪರಿಣಾಮಕಾರಿಯಾಗಿ ನಿರ್ವಹಿಸಲು ಎಲ್ಲಾ ಇಲಾಖೆಗಳು ಮಾರ್ಗಸೂಚಿಗಳನ್ವಯ ಕ್ರಮ ಕೈಗೊಳ್ಳಲು ಆದೇಶಿಸಿದೆ.

ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆಯಲ್ಲಿ ಸ್ವೀಕರಿಸಲಾದ ಸಾರ್ವಜನಿಕ ಕುಂದುಕೊರತೆಗಳನ್ನು ಸಮಗ್ರವಾಗಿ ಹಾಗೂ ಪರಿಣಾಮಕಾರಿಯಾಗಿ ನಿರ್ವಹಿಸಿರುವ ಪ್ರಗತಿಯನ್ನು ಪ್ರತಿ ತಿಂಗಳು ಪರಿಶೀಲಿಸುವ ಸಲುವಾಗಿ ರಾಜ್ಯ ಮಟ್ಟದಲ್ಲಿ ಸರ್ಕಾರದ ಮುಖ್ಯ

ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಮತ್ತು ಜಿಲ್ಲಾ ಮಟ್ಟದಲ್ಲಿ ಆಯಾಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿರುವ ಮೇರೆಗೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 29 ಪಿಆರ್‌ಜೆ 2020**
**ಬೆಂಗಳೂರು, ದಿನಾಂಕ:09-08-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆಯಲ್ಲಿ ಸ್ವೀಕರಿಸಲಾದ ಸಾರ್ವಜನಿಕ ಕುಂದುಕೊರತೆಗಳನ್ನು ಸಮಗ್ರವಾಗಿ ಹಾಗೂ ಪರಿಣಾಮಕಾರಿಯಾಗಿ ನಿರ್ವಹಿಸಿರುವ ಪ್ರಗತಿಯನ್ನು ಪ್ರತಿ ತಿಂಗಳು ಪರಿಶೀಲಿಸುವ ಸಲುವಾಗಿ ರಾಜ್ಯ ಮಟ್ಟದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸಮಿತಿಯನ್ನು ರಚಿಸಿ ಸರ್ಕಾರವು ಆದೇಶಿಸಿದೆ.

| | | |
|---|---|---|
| 1. | ಸರ್ಕಾರದ ಮುಖ್ಯ ಕಾರ್ಯದರ್ಶಿ | ಅಧ್ಯಕ್ಷರು |
| 2. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ | ಸದಸ್ಯರು |
| 3. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು | ಸದಸ್ಯರು |
| 4. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜನಸ್ಪಂದನ) | ಸದಸ್ಯರು |
| 5. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) | ಸದಸ್ಯ ಕಾರ್ಯದರ್ಶಿ |

ಮೇಲ್ಕಂಡ ಸಮಿತಿಯು ಈ ಕೆಳಕಂಡ ಕರ್ತವ್ಯಗಳನ್ನು ಹೊಂದಿರುತ್ತದೆ:

1. ನಿಗದಿತ ಕಾಲಮಿತಿಯೊಳಗೆ ಸಾರ್ವಜನಿಕ ಕುಂದುಕೊರತೆ / ದೂರುಗಳ ವಿಲೇವಾರಿ ಹಾಗೂ ತಿರಸ್ಕೃತ ದೂರುಗಳ ಪರಿಶೀಲನೆ.
2. ಸಾರ್ವಜನಿಕ ಕುಂದುಕೊರತೆ / ದೂರುಗಳ ಗುಣಾತ್ಮಕ ವಿಲೇವಾರಿ ಬಗ್ಗೆ ಪರಿಶೀಲನೆ.
3. ಸಚಿವಾಲಯದ ಹಾಗೂ ಕ್ಷೇತ್ರ ಮಟ್ಟದ ಇಲಾಖಾ ಮುಖ್ಯಸ್ಥರು / ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ನಿಗಮ / ಮಂಡಳಿ / ಸ್ವಾಯತ್ತ ಸಂಸ್ಥೆಗಳ ಸಾರ್ವಜನಿಕ ಕುಂದುಕೊರತೆ / ದೂರುಗಳನ್ನು ನಿಗದಿತ ಕಾಲಾವಧಿಯೊಳಗೆ ವಿಲೇ ಮಾಡದೇ ಇರುವ ಅರ್ಜಿಗಳ ಬಗ್ಗೆ ಮರು ಪರಿಶೀಲನೆ.
4. ಸರ್ಕಾರದ ಆದೇಶ ಮತ್ತು ನಿಯಮಗಳಲ್ಲಿ ಅವಕಾಶವಿದ್ದರೂ ಕ್ಷೇತ್ರ ಮಟ್ಟದ ಇಲಾಖಾ ಮುಖ್ಯಸ್ಥರುಗಳು / ನಿಗಮ / ಮಂಡಳಿ / ಸ್ವಾಯತ್ತ ಸಂಸ್ಥೆಗಳು ದೂರುಗಳನ್ನು ತಂತ್ರಾಂಶದಲ್ಲಿ ಕೈಗೊಳ್ಳಲಾದ ಕ್ರಮಗಳ ವರದಿಯ ಬಗ್ಗೆ ಪರಿಶೀಲನೆ ಹಾಗೂ ನಿಗದಿತ ಅವಧಿಯೊಳಗೆ ವಿಲೇ ಮಾಡದೇ ಇದ್ದಲ್ಲಿ ಅವರುಗಳ ಮೇಲೆ ನಿಯಮಾನುಸಾರ ಶಿಸ್ತಿನ ಕ್ರಮ ಕೈಗೊಳ್ಳುವ ಕುರಿತು ಸಮಿತಿಯು ಪರಿಶೀಲಿಸಿ ಸಂಬಂಧಪಟ್ಟ ಸಚಿವಾಲಯದ ಅಪರ ಮುಖ್ಯಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಶಿಫಾರಸ್ಸು ಮಾಡತಕ್ಕದ್ದು.
5. ಸರ್ಕಾರದ ಆದೇಶ ಮತ್ತು ನಿಯಮಗಳಲ್ಲಿ ಅವಕಾಶವಿದ್ದರೂ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಸಾರ್ವಜನಿಕ ಕುಂದುಕೊರತೆ / ದೂರುಗಳನ್ನು ತಂತ್ರಾಂಶದಲ್ಲಿ ನಿಗದಿತ ಅವಧಿಯೊಳಗೆ ವಿಲೇ ಮಾಡದೇ ಇದ್ದಲ್ಲಿ ಅವರುಗಳ ಮೇಲೆ ನಿಯಮಾನುಸಾರ ಶಿಸ್ತಿನ ಕ್ರಮ ಕೈಗೊಳ್ಳುವ ಬಗ್ಗೆ ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡತಕ್ಕದ್ದು.
6. ತಿಂಗಳಿಗೊಮ್ಮೆ ಪ್ರಗತಿ ಪರಿಶೀಲನಾ ಸಮಿತಿ ಸಭೆಯನ್ನು ಕರೆಯತಕ್ಕದ್ದು.

ಮುಂದುವರೆದು, ಏಕೀಕೃತ ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆಯಲ್ಲಿ ಸ್ವೀಕರಿಸಲಾದ ಸಾರ್ವಜನಿಕ ಕುಂದುಕೊರತೆಗಳನ್ನು ಸಮಗ್ರವಾಗಿ ಹಾಗೂ ಪರಿಣಾಮಕಾರಿಯಾಗಿ ನಿರ್ವಹಿಸಿರುವ ಪ್ರಗತಿಯನ್ನು ಪ್ರತಿ ತಿಂಗಳು ಪರಿಶೀಲಿಸುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಆಯಾಯ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸಮಿತಿಯನ್ನು ರಚಿಸಿ ಸರ್ಕಾರವು ಆದೇಶಿಸಿದೆ.

| | | |
|---|---|---|
| 1. | ಜಿಲ್ಲಾಧಿಕಾರಿ | ಅಧ್ಯಕ್ಷರು |
| 2. | ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್ | ಸದಸ್ಯರು |
| 3. | ಅಪರ ಜಿಲ್ಲಾಧಿಕಾರಿ | ಸದಸ್ಯ ಕಾರ್ಯದರ್ಶಿ |
| 4. | ಎಲ್ಲಾ ಉಪ ವಿಭಾಗಗಳ ಉಪ ವಿಭಾಗಾಧಿಕಾರಿಗಳು | ಸದಸ್ಯರು |
| 5. | ಜಿಲ್ಲಾ ಯೋಜನಾ ನಿರ್ದೇಶಕರು, ನಗರಾಭಿವೃದ್ಧಿ ಕೋಶ | ಸದಸ್ಯರು |

ಮೇಲ್ಕಂಡ ಸಮಿತಿಯು ಈ ಕೆಳಕಂಡ ಕರ್ತವ್ಯಗಳನ್ನು ಹೊಂದಿರುತ್ತದೆ:

1. ನಿಗದಿತ ಕಾಲಮಿತಿಯೊಳಗೆ ಸೇವೆಗಳ ವಿಲೇವಾರಿ ಹಾಗೂ ತಿರಸ್ಕೃತ ಪರಿಶೀಲನೆ.
2. ಸೇವೆಗಳ ಗುಣಾತ್ಮಕ ವಿಲೇವಾರಿ ಬಗ್ಗೆ ಪರಿಶೀಲನೆ.
3. ದೂರುಗಳನ್ನು ನಿಗದಿತ ಕಾಲಾವಧಿಯೊಳಗೆ ವಿಲೇ ಮಾಡದೇ ಇರುವ ಅರ್ಜಿಗಳ ಬಗ್ಗೆ ಪರಿಶೀಲನೆ.
4. ಸರ್ಕಾರದ ಆದೇಶ ಮತ್ತು ನಿಯಮಗಳಲ್ಲಿ ಅವಕಾಶವಿದ್ದರೂ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ದೂರುಗಳನ್ನು ತಂತ್ರಾಂಶದಲ್ಲಿ ನಿಗಧಿತ ಅವಧಿಯೊಳಗೆ ವಿಲೇ ಮಾಡದೇ ಇರುವ ಬಗ್ಗೆ ಪರಿಶೀಲಿಸಿ, ಇದ್ದಲ್ಲಿ ಅವರುಗಳ ಮೇಲೆ ನಿಯಮಾನುಸಾರ ಶಿಸ್ತಿನ ಕ್ರಮ ಕೈಗೊಳ್ಳುವ ಬಗ್ಗೆ ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡತಕ್ಕದ್ದು.
5. ತಿಂಗಳಿಗೊಮ್ಮೆ ಪ್ರಗತಿ ಪರಿಶೀಲನಾ ಸಮಿತಿ ಸಭೆಯನ್ನು ಕರೆಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎನ್.ಶ್ರೀವತ್ಸ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
ಇಲಾಖೆ (ಇ-ಆಡಳಿತ)

**ಇವರಿಗೆ**:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ 50 ಪ್ರತಿಗಳನ್ನು ಈ ಇಲಾಖೆಗೆ ಒದಗಿಸುವಂತೆ ಕೋರಲಾಗಿದೆ.

ಪ್ರತಿ:
1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

5. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ವಿಧಾನಸೌಧ / ವಿಕಾಸಸೌಧ / ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ - ಸಂಬಂಧಪಟ್ಟ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ ಇವರ ಮುಖಾಂತರ
7. ಎಲ್ಲಾ ನಿಗಮ / ಮಂಡಳಿ / ಸ್ವಾಯತ್ತ ಸಂಸ್ಥೆಗಳು - ಸಂಬಂಧಪಟ್ಟ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ ಇವರ ಮುಖಾಂತರ
8. ಎಲ್ಲಾ ಜಿಲ್ಲಾಧಿಕಾರಿ - ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಮುಖಾಂತರ
9. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್ - ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಮುಖಾಂತರ
10. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಇ-ಆಡಳಿತ ಕೇಂದ್ರ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು
14. ಶಾಖಾ ರಕ್ಷ ಕಡತ.